## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಚಾಮರಾಜನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಕಟ್ಟಡ ಬಾಡಿಗೆಯನ್ನು ನಿಗಧಿಪಡಿಸುವ ಬಗ್ಗೆ.

ಓದಲಾಗಿದೆ:- ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಪತ್ರ ಸಂಖ್ಯೆ:ಪವಕನಿ/ಇಡಿ-2/ಸಿಆರ್-49/11-12, ದಿ:04.08.2011.

*****

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಚಾಮರಾಜನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಸ್ವಂತ ಕಟ್ಟಡ ಲಭ್ಯವಿಲ್ಲದ ಕಾರಣ ಶ್ರೀ ಆರ್.ಶಿವಕುಮಾರ್, ಬಿನ್ ಎಸ್.ರಾಜಶೆಟ್ಟಿ, ಜೋಡಿ ರಸ್ತೆ, ಚಾಮರಾಜನಗರ ಇವರ ಮಾಲೀಕತ್ವದ ಚಾಮರಾಜನಗರ ಟೌನ್, ಭ್ರಮರಾಂಭ ಬಡಾವಣೆ ನಂ.22/198ರ ಕಟ್ಟಡದಲ್ಲಿ ದಿನಾಂಕ:01.04.2010ರಿಂದ ನಡೆಸಲಾಗುತ್ತಿದ್ದು, ಸದರಿ ಬಾಡಿಗೆ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯವರು ಮಾಹೆಯಾನ ರೂ.54,000/-(ಐವತ್ತು ನಾಲ್ಕು ಸಾವಿರದ ರೂಪಾಯಿಗಳು ಮಾತ್ರ)ಗಳಿಗೆ ಮಾಸಿಕ ಬಾಡಿಗೆಯನ್ನು ನಿಗಧಿಪಡಿಸಿದ್ದು, ದಿನಾಂಕ:01.04.2010ರಿಂದ ಪಾವತಿಸಲು ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು, ಇವರು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 90 ಮೊದೇಶಾ 2011 ಬೆಂಗಳೂರು,**
**ದಿನಾಂಕ:03-06-2013**

ಚಾಮರಾಜನಗರ ಟೌನ್, ಭ್ರಮರಾಂಭ ಬಡಾವಣೆ ಶ್ರೀ ಆರ್.ಶಿವಕುಮಾರ್, ಬಿನ್ ಎಸ್.ರಾಜಶೆಟ್ಟಿ, ಜೋಡಿ ರಸ್ತೆ, ಚಾಮರಾಜನಗರ ಇವರ ಮಾಲೀಕತ್ವದ ಕಟ್ಟಡದಲ್ಲಿ ದಿನಾಂಕ:01.04.2010ರಿಂದ ನಡೆಸಲಾಗುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಚಾಮರಾಜನಗರ, ಈ ವಸತಿ ಶಾಲೆಯ ಕಟ್ಟಡಕ್ಕೆ ಲೋಕೋಪಯೋಗಿ ಇಲಾಖೆಯವರು ಮಾಹೆಯಾನ ನಿಗಧಿಪಡಿಸಿದ ರೂ.54,000/-(ಐವತ್ತು ನಾಲ್ಕು ಸಾವಿರದ ರೂಪಾಯಿಗಳು ಮಾತ್ರ)ಗಳಂತೆ ಬಾಡಿಗೆಯನ್ನು ದಿನಾಂಕ:01.04.2010ರಿಂದ 31.03.2011ರವರೆಗೆ ಅನ್ವಯಿಸುವಂತೆ ಹಾಗೂ TDS ಆದಾಯ ತೆರಿಗೆಯನ್ನು ನಿಯಮಾನುಸಾರ ಕೇಂದ್ರ ಸರ್ಕಾರದ ಲೆಕ್ಕಕ್ಕೆ ಜಮೆಗೊಳಿಸುವ ಷರತ್ತಿನೊಂದಿಗೆ ಕಟ್ಟಡದ ಮಾಲೀಕರಿಗೆ ಬಾಡಿಗೆ ಪಾವತಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂ:ಸಕಕಾ 168 ಆಂಆಸ 2011, ದಿನಾಂಕ:23.02.2013 ರಲ್ಲಿ ನೀಡಿರುವ ಸಹಮತಿ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 1996 ದಿನಾಂಕ:10-07-1996ರಲ್ಲಿ ಸರ್ಕಾರದ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು,(ಎ ಮತ್ತು ಇ)(ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು
2. ಜಿಲ್ಲಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ
3. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು
6. ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ
7. ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಚಾಮರಾಜನಗರ ವಿಭಾಗ, ಚಾಮರಾಜನಗರ
8. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಖಜಾನಾಧಿಕಾರಿಗಳು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ
10. ಶ್ರೀ ಆರ್.ಶಿವಕುಮಾರ್, ಬಿನ್ ಎಸ್.ರಾಜಶೆಟ್ಟಿ, ಜೋಡಿ ರಸ್ತೆ, ಚಾಮರಾಜನಗರ